# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತೆಂಟನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

## ಬುಧವಾರ, ದಿನಾಂಕ:21ನೇ ಡಿಸೆಂಬರ್, 2022

## (ಸಮಯ: ಬೆಳಗ್ಗೆ: 11.00 ಗಂಟೆಗೆ)

* * *

## 01. ಸಭಾಪತಿ ಸ್ಥಾನಕ್ಕೆ ಚುನಾವಣೆ

01. **ಡಾ. ವೈ.ಎ. ನಾರಾಯಣಸ್ವಾಮಿ ಅವರು ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ** ಅವರನ್ನು ವಿಧಾನ ಪರಿಷತ್ತಿನ ಸಭಾಪತಿಯವರನ್ನಾಗಿ ಚುನಾಯಿಸಬೇಕೆಂದು ಸೂಚಿಸುವುದು.

    **ಶ್ರೀ ಆಯನೂರು ಮಂಜುನಾಥ್** ಅವರು ಪ್ರಸ್ತಾವವನ್ನು ಅನುಮೋದಿಸುವುದು.

02. **ಡಾ. ತೇಜಸ್ವಿನಿಗೌಡ ಅವರು ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ** ಅವರನ್ನು ವಿಧಾನ ಪರಿಷತ್ತಿನ ಸಭಾಪತಿಯವರನ್ನಾಗಿ ಚುನಾಯಿಸಬೇಕೆಂದು ಸೂಚಿಸುವುದು.

    **ಶ್ರೀ ಆರ್ ಶಂಕರ್** ಅವರು ಪ್ರಸ್ತಾವವನ್ನು ಅನುಮೋದಿಸುವುದು.

03. **ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ ಅವರು ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ** ಅವರನ್ನು ವಿಧಾನ ಪರಿಷತ್ತಿನ ಸಭಾಪತಿಯವರನ್ನಾಗಿ ಚುನಾಯಿಸಬೇಕೆಂದು ಸೂಚಿಸುವುದು.

    **ಶ್ರೀ ಎಸ್.ವ್ಹಿ. ಸಂಕನೂರ** ಅವರು ಪ್ರಸ್ತಾವವನ್ನು ಅನುಮೋದಿಸುವುದು.

04. **ಶ್ರೀ ಅ.ದೇವೇಗೌಡ ಅವರು ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ** ಅವರನ್ನು ವಿಧಾನ ಪರಿಷತ್ತಿನ ಸಭಾಪತಿಯವರನ್ನಾಗಿ ಚುನಾಯಿಸಬೇಕೆಂದು ಸೂಚಿಸುವುದು.

    **ಶ್ರೀ ಪ್ರದೀಪ್ ಶೆಟ್ಟರ್** ಅವರು ಪ್ರಸ್ತಾವವನ್ನು ಅನುಮೋದಿಸುವುದು.

## 02. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಮೂರನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಮೂರನೆಯ ಪಟ್ಟಿ

## 03. ವರದಿಗಳನ್ನೊಪ್ಪಿಸುವುದು

ಅ) **ಶ್ರೀ ಎಂ.ಕೆ. ಪ್ರಾಣೇಶ್, (ಅಧ್ಯಕ್ಷರು, ಅರ್ಜಿಗಳ ಸಮಿತಿ)** ಅವರು ಕರ್ನಾಟಕ ವಿಧಾನ ಪರಿಷತ್ತಿನ ಅರ್ಜಿಗಳ ಸಮಿತಿಯ 29ನೇ ವರದಿಯನ್ನು ಒಪ್ಪಿಸುವುದು.

ಆ) **ಶ್ರೀ ಪ್ರಕಾಶ್ ಬಾಬಣ್ಣ ಹುಕ್ಕೇರಿ (ಸದಸ್ಯರು, ಅಧೀನ ಶಾಸನ ರಚನಾ ಸಮಿತಿ)** ಅವರು ಕರ್ನಾಟಕ ವಿಧಾನ ಮಂಡಲದ ಅಧೀನ ಶಾಸನ ರಚನಾ ಸಮಿತಿಯ 2021–22ನೇ ಸಾಲಿನ 52ನೇ ವರದಿಯನ್ನು ಒಪ್ಪಿಸುವುದು.

..2..

## 04. ಚುನಾವಣಾ ಪ್ರಸ್ತಾವ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಮಾನ್ಯ ಸಭಾನಾಯಕರು ಹಾಗೂ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು) ಅವರು:–**

ಕರ್ನಾಟಕ ವಿಧಾನ ಮಂಡಲಗಳ ಜಂಟಿ ಸಮಿತಿಗಳು ಹಾಗೂ ವಿಧಾನ ಪರಿಷತ್ತಿನ ಸ್ಥಾಯಿ ಸಮಿತಿಗಳ ಅವಧಿಯು ದಿನಾಂಕ:05.01.2023ಕ್ಕೆ ಮುಕ್ತಾಯಗೊಳ್ಳುತ್ತಿದ್ದು, 2023ರ ವಿಧಾನ ಸಭೆಯ ಸಾರ್ವತ್ರಿಕ ಚುನಾವಣೆಯ ನಂತರ ಸಮಿತಿಗಳ ಪುನರ್ ರಚನೆ ಮಾಡುವ ಪ್ರಸ್ತಾವವನ್ನು ಮಂಡಿಸುವುದು.

## 05. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ಕೆ.ಪಿ. ನಂಜುಂಡಿ ವಿಶ್ವಕರ್ಮ** ಅವರು ರಾಜ್ಯ ಸರ್ಕಾರ ಪ್ರತಿ ವರ್ಷ ವಿವಿಧ ಸಮಾಜಗಳ ಜಯಂತಿಗಳ ಆಚರಣೆಗೆ ಒದಗಿಸುತ್ತಿರುವ ಅನುದಾನದಲ್ಲಿ ತಾರತಮ್ಯವಾಗುತ್ತಿರುವ ಕುರಿತು ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

02. **ಶ್ರೀ ದಿನೇಶ್ ಗೂಳಿಗೌಡ ಮತ್ತು ಶ್ರೀ ಮರಿತಿಬ್ಬೇಗೌಡ** ಅವರುಗಳು ಮಂಡ್ಯ ಜಿಲ್ಲೆಯಲ್ಲಿನ ಹಾಲು ಉತ್ಪಾದಕರಿಗೆ ನೀಡುತ್ತಿರುವ ಪ್ರೋತ್ಸಾಹ ಧನವನ್ನು ಆರು ತಿಂಗಳುಗಳಿಂದ ಬಿಡುಗಡೆಗೊಳಿಸದೆ ಇರುವ ಕುರಿತು ಮಾನ್ಯ ಪಶುಸಂಗೋಪನೆ ಸಚಿವರ ಗಮನ ಸೆಳೆಯುವುದು.

03. **ಶ್ರೀಯುತರುಗಳಾದ ಕೆ.ಎ.ತಿಪ್ಪೇಸ್ವಾಮಿ, ಎಸ್.ಎಲ್. ಭೋಜೇಗೌಡ, ಟಿ.ಎ. ಶರವಣ, ಡಾ. ಸೂರಜ್ ರೇವಣ್ಣ ಹಾಗೂ ಸಿ.ಎನ್.ಮಂಜೇಗೌಡ** ಅವರುಗಳು ನೆಟೆ ರೋಗ ಹಾಗೂ ಪ್ರವಾಹದಿಂದ ಬೆಳೆ ಹಾನಿಯಾಗಿ ತೊಗರಿ ಬೇಳೆ ಬೆಳೆಗಾರರು ತೀವ್ರ ಸಂಕಷ್ಟಕ್ಕೆ ಸಿಲುಕಿರುವ ಕುರಿತು ಮಾನ್ಯ ಕೃಷಿ ಸಚಿವರ ಗಮನ ಸೆಳೆಯುವುದು.

04. **ಶ್ರೀ ಎಂ.ಕೆ. ಪ್ರಾಣೇಶ್** ಅವರು ಚಿಕ್ಕಮಗಳೂರು ಜಿಲ್ಲೆಯ ಎನ್.ಆರ್.ಪುರ ಹಾಗೂ ಕೊಪ್ಪ ತಾಲ್ಲೂಕಿನ ಸರ್ಕಾರಿ ಆಸ್ಪತ್ರೆಗಳಲ್ಲಿ ಡಯಾಲಿಸಿಸ್ ಯಂತ್ರ ಹಾಳಾಗಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಕುರಿತು ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

## 06. ನಿಯಮ 330ರ ಮೇರೆಗೆ

೦1. **ಶ್ರೀ ಸಲೀಂ ಅಹಮದ್** ಅವರು ಅಂಗನವಾಡಿ ಕಾರ್ಯಕರ್ತರಿಗೆ ಸಾಮಾಜಿಕ, ಆರ್ಥಿಕ ಮತ್ತು ಔದ್ಯಮಿಕ ಭದ್ರತೆ ಒದಗಿಸುವ ಕುರಿತು ಪ್ರಸ್ತಾಪಿಸುವುದು.

೦2. **ಶ್ರೀ ಡಿ.ಎಸ್. ಅರುಣ್** ಅವರು ಶಿವಮೊಗ್ಗ ಜಿಲ್ಲೆಯಲ್ಲಿ ಉತ್ಪಾದನೆಯಾಗುವ ಅಡಿಕೆ ಮಾರಾಟದ ಒಟ್ಟು ವಹಿವಾಟಿನ ತೆರಿಗೆ ಆದಾಯದ ಬಗ್ಗೆ ಗೊಂದಲವಿರುವ ಕುರಿತು ಪ್ರಸ್ತಾಪಿಸುವುದು.

## 07. ಅರ್ಧ ಗಂಟೆ ಕಾಲಾವಧಿ ಚರ್ಚೆ

ರಾಜ್ಯದಲ್ಲಿರುವ ಕಬ್ಬು ಬೆಳೆಗಾರರಿಗೆ ನಿಗದಿಪಡಿಸಲಾದ ಎಫ್.ಆರ್.ಪಿ ಕುರಿತು ದಿನಾಂಕ:20.12.2022ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:21 (166+215)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಪ್ರಕಾಶ್ ಕೆ.ರಾಥೋಡ್ ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು ಮತ್ತು ಶ್ರೀ ಪಿ.ಆರ್. ರಮೇಶ್** ಅವರುಗಳಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

## 08. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಚರ್ಚೆ

**ಶ್ರೀಯುತರುಗಳಾದ;–**

| | |
|---|---|
| ಬಿ.ಕೆ.ಹರಿಪ್ರಸಾದ್, ಮಾನ್ಯ ವಿರೋಧ ಪಕ್ಷದ ನಾಯಕರು, ಪ್ರಕಾಶ್ ಕೆ. ರಾಥೋಡ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು, ಸಲೀಂ ಅಹಮದ್, ಕೆ.ಎ.ತಿಪ್ಪೇಸ್ವಾಮಿ, ಶರವಣ ಟಿ.ಎ. ಹಾಗೂ ಇತರರು. | ಕರ್ನಾಟಕ– ಮಹಾರಾಷ್ಟ್ರ ಗಡಿ ವಿವಾದವನ್ನು ಶಾಶ್ವತವಾಗಿ ಪರಿಹರಿಸುವಲ್ಲಿ ಸರ್ಕಾರವು ವಿಫಲವಾಗಿರುವ ಕುರಿತು. |

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**